# All India Radio: Bangalore
# Regional Bulletin In Kannada
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

26.02.2026 6.40 p.m.

ಮುಖ್ಯಾಂಶಗಳು

೧.೬೦ಕ್ಕೂ ಅಧಿಕ ವಸತಿ ಶಾಲೆಗಳಲ್ಲಿ ನಾವಿನ್ಯತಾ ಪ್ರಯೋಗಾಲಯ ಸ್ಥಾಪನೆಗೆ ರಾಜ್ಯ ಸರ್ಕಾರ ಕ್ರಮ - ಸಚಿವ ಎನ್.ಎಸ್.ಬೋಸರಾಜು

೨.ಗ್ಯಾರಂಟಿ ಯೋಜನೆಗಳು ಹೊರೆಯಲ್ಲ, ಅಭಿವೃದ್ಧಿಯ ಒಂದು ಭಾಗ - ಸಚಿವ ಎಂ.ಬಿ.ಪಾಟೀಲ್

೩.ಶಿವಮೊಗ್ಗದಲ್ಲಿ ೧೦ ಕಿಲೋವ್ಯಾಟ್ ಸಾಮರ್ಥ್ಯದ ಟ್ರಾನ್ಸ್ಮೀಟರ್ ಉದ್ಘಾಟಿಸಿದ ಕೇಂದ್ರ ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್

೪.ರೇಡಿಯೋ ಕಿಸಾನ್ ದಿವಸ್; ಹಾಸನ ಆಕಾಶವಾಣಿಯಲ್ಲಿ ಕೃತಕ ಬುದ್ಧಿಮತ್ತೆ ಮತ್ತು ಕೃಷಿ ಅಭಿವೃದ್ಧಿ ಕುರಿತ ವಿಚಾರ ಸಂಕಿರಣ

೫.ರಣಜಿ ಟ್ರೋಫಿ ಫೈನಲ್; ಮೂರನೇ ದಿನದಾಟದ ಅಂತ್ಯಕ್ಕೆ ಜಮ್ಮು ಕಾಶ್ಮೀರಕ್ಕಿಂತ ೩೬೪ ರನ್‌ಗಳ ಹಿನ್ನಡೆಯಲ್ಲಿ ಕರ್ನಾಟಕ

****************

ಗುತ್ತಿಗೆದಾರರಿಗೆ ೩೭ ಸಾವಿರ ಕೋಟಿ ರೂಪಾಯಿ ಬಾಕಿ ಉಳಿಸಿಕೊಂಡಿರುವುದನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿ ಸರ್ಕಾರದ ವಿರುದ್ಧ ಮಾರ್ಚ್ ೬ರಂದು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಮಂಜುನಾಥ್ ತಿಳಿಸಿದ್ದಾರೆ.

ಕೋಲಾರ ನಗರದಲ್ಲಿ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಾಕಿ ಮೊತ್ತ ಬಿಡುಗಡೆಗೆ ಒತ್ತಾಯಿಸಿ ಹಲವು ಬಾರಿ ಸರ್ಕಾರ, ಇಲಾಖೆ ಮುಖ್ಯಸ್ಥರೊಂದಿಗೆ ಪತ್ರ ವ್ಯವಹಾರ ಮಾಡಲಾಗಿದೆ. ಆದರೆ ಸ್ಪಂದನೆ ದೊರೆಯದ ಹಿನ್ನಲೆಯಲ್ಲಿ ಪ್ರತಿಭಟನೆ ಕೈಗೆತ್ತಿಕೊಳ್ಳಲಾಗಿದೆ ಎಂದರು.

ಪ್ರತಿಭಟನೆ ಕುರಿತು ಈಗಾಗಲೇ ೨೩ ಜಿಲ್ಲೆಗಳಲ್ಲಿ ಸಭೆ ನಡೆಸಲಾಗಿದೆ. ೧೦ ರಿಂದ ೧೫ ಸಾವಿರ ಗುತ್ತಿಗೆದಾರರು ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದು, ಇದಕ್ಕೂ ಸ್ಪಂದಿಸದಿದ್ದರೆ ಏಪ್ರಿಲ್‌ನಿಂದ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದರು.

**************************

ಪರಿಶಿಷ್ಟರ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಸಂತ್ರಸ್ತರಿಗೆ ನೀಡಲಾಗುವ ಪರಿಹಾರ ಹಣ ಮತ್ತು ಇತರ ಸೌಲಭ್ಯಗಳನ್ನು ವಿಳಂಬವಿಲ್ಲದೆ ಒದಗಿಸಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದರು.

ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ, ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನ ಸಂಬAಧ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಉಪವಿಭಾಗ ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಕುಂದುಕೊರತೆಗಳ ಕುರಿತು ಜಾಗೃತಿ ಉಸ್ತುವಾರಿ ಸಮಿತಿ ಸಭೆಗಳನ್ನು ಕಡ್ಡಾಯವಾಗಿ ನಡೆಸಿ ಸಭೆಗಳಲ್ಲಿ ಸಲ್ಲಿಕೆಯಾಗುವ ದೂರುಗಳನ್ನು ಸ್ಥಳೀಯ ಮಟ್ಟದಲ್ಲೇ ಬಗೆಹರಿಸಲು ಪ್ರಯತ್ನಿಸಬೇಕು ಎಂದು ಹೇಳಿದರು.

ಕುಂದುಕೊರತೆಗಳ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಜಿಲ್ಲಾಡಳಿತಕ್ಕೆ ವರದಿ ಸಲ್ಲಿಸಬೇಕೆಂದು ತಿಳಿಸಿದ ಅವರು, ಪ್ರತಿ ತಾಲ್ಲೂಕು ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ಪಂಗಡಗಳ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ತಿಳಿಸಿದರು.

**************************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಶಯದಂತೆ ಪ್ರತಿ ಲೋಕಸಭಾ ಕ್ಷೇತ್ರದಲ್ಲಿ ಗ್ರಾಮೀಣ ಭಾಗದ ಹಾಗೂ ನಗರ ಭಾಗದ ಕ್ರೀಡಾಪಟುಗಳು ತಮ್ಮ ಸಾಮರ್ಥ್ಯ ಹಾಗೂ ಪ್ರತಿಭೆ ಪ್ರದರ್ಶಿಸಲು 'ಸಂಸದ್ ಖೇಲ್ ಮಹೋತ್ಸವ'ವನ್ನು ಆಯೋಜಿಸಲಾಗುತ್ತಿದೆ.

ಅದರಂತೆ, ಸಂಸದ ಪ್ರಲ್ಹಾದ್ ಜೋಶಿ ಅವರ ನೇತೃತ್ವದಲ್ಲಿ ನಡೆದ ಧಾರವಾಡ ಸಂಸದ್ ಕ್ರೀಡಾ ಮಹೋತ್ಸವದ ಅಂತಿಮ ಹಂತದ ಫೈನಲ್ ಪಂದ್ಯಗಳು ಧಾರವಾಡದ ಕೆ.ಸಿ.ಡಿ. ಮೈದಾನದಲ್ಲಿ ನಡೆದವು.

ಕ್ರೀಡಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಮುರುಘಾ ಮಠದ ಮಲ್ಲಿಕಾರ್ಜುನ ಸ್ವಾಮೀಜಿ, ದೇಹ ಸದೃಢವಾಗಿಡಲು ಕ್ರೀಡೆಗೆ ಹೆಚ್ಚು ಒತ್ತು ನೀಡುವುದು ಅವಶ್ಯಕವಾಗಿದೆ ಎಂದು ತಿಳಿಸಿದರು.

ಮಾಜಿ ಶಾಸಕಿ ಸಿಮಾ ಮಸೂತಿ, ಹುಬ್ಬಳ್ಳಿ ಧಾರವಾಡ ಪಾಲಿಕೆ ಮೇಯರ್ ಜ್ಯೋತಿ ಪಾಟೀಲ್ ಉಪ ಮೇಯರ್ ಸಂತೋಷ್ ಚೌವಾಣ, ಮಹಾನಗರ ಪಾಲಿಕೆಯ ಸದಸ್ಯರು ಹಾಗೂ ಪಕ್ಷದ ಪದಾಧಿಕಾರಿಗಳು ಉಪಸ್ಥಿತರಿದ್ದರು.

*************************

ಜಲ ಮೂಲಗಳು ಸಾಮಾಜಿಕ ಜನಜೀವನದ ಮೇಲೆ ಪರಿಣಾಮ ಬೀರಲಿದ್ದು, ಅವುಗಳನ್ನು ಸಂರಕ್ಷಿಸುವುದು ಸಾಮಾಜಿಕ ಹೊಣೆಗಾರಿಕೆಯಾಗಿದೆ ಎಂದು ಧರ್ಮಸ್ಥಳ ಕ್ಷೇತ್ರದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಹೇಳಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ರಾಜಘಟ್ಟ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ವತಿಯಿಂದ ನಡೆದ ನಂದಿಕುAಟೆ ಕೆರೆಯ ಹೂಳೆತ್ತುವ ಕಾಮಗಾರಿಯ ನಾಮಫಲಕ ಅನಾವರಣ ಸಮಾರಂಭ ಹಾಗೂ ಕೆರೆ ಹಸ್ತಾಂತರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

*************************

ಪೌತಿ ಖಾತೆ ಹಕ್ಕುಪತ್ರ, ದರಖಾಸ್ತು ಪೋಡಿ ದಾಖಲೆ ಪತ್ರ ಸೇರಿದಂತೆ ೧೫ ಸಾವಿರ ಕಂದಾಯ ಸೇವೆಗಳ ದಾಖಲೆ ವಿತರಣೆ ಹಾಗೂ ವಿಶೇಷ ಕಂದಾಯ ಗ್ರಾಮ ಅಭಿಯಾನ ೨.೦ಕ್ಕೆ ಚಿಕ್ಕಬಳ್ಳಾಪುರದಲ್ಲಿ ನಾಳೆ ಚಾಲನೆ ದೊರೆಯಲಿದೆ.

ನಾಳೆ ಚಿಕ್ಕಬಳ್ಳಾಪುರ ಕಂದಾಯ ಸೇವೆಗಳ ಗ್ಯಾರಂಟಿ ಸಮರ್ಪಣಾ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದ್ದು, ಈ ಸಮಾವೇಶದಲ್ಲಿ ಜಿಲ್ಲೆಯ ಒಟ್ಟು ೧೫ ಸಾವಿರ ಜನರು ವಿವಿಧ ಕಂದಾಯ ಸೇವೆಗಳ ಫಲಾನುಭವಿಗಳಾಗಿ ಹಕ್ಕು ಪತ್ರ ಮತ್ತಿತರ ದಾಖಲೆಗಳನ್ನು ಪಡೆಯಲಿದ್ದಾರೆ. ಕಂದಾಯ ಸಚಿವ ಕೃಷ್ಣಬೈರೇಗೌಡ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅವರು ಫಲಾನುಭವಿಗಳಿಗೆ ದಾಖಲೆಗಳನ್ನು ಹಸ್ತಾಂತರಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ವಿಶೇಷ ಕಂದಾಯ ಗ್ರಾಮ ಅಭಿಯಾನ ೨.೦ಗೆ ಚಾಲನೆ ನೀಡಲಾಗುವುದು.

*************************

ಚಾಮರಾಜನಗರ ಜಿಲ್ಲೆಯಲ್ಲಿ ಕುಡಿಯುವ ನೀರಿನ ಬವಣೆ ನೀಗಿಸಲು ಪ್ರಾಯೋಗಿಕವಾಗಿ ವಾತಾವರಣದಲ್ಲಿನ ತೇವಾಂಶ ಹೀರಿಕೊಂಡು ನೀರು ಉತ್ಪಾದಿಸುವ ಏರೋ ವಾಟರ್ ಸಾಧನವನ್ನು ಚಾಮರಾಜನಗರದ ಸೋಮವಾರಪೇಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅಳವಡಿಸಿಸಲಾಗಿದ್ದು ವಿದ್ಯುಚ್ಛಕ್ತಿ ಮೂಲಕ ಈ ಸಾಧನ ಕಾರ್ಯ ನಿರ್ವಹಿಸುತ್ತಿದೆ.

ವಾತಾವರಣದಲ್ಲಿನ ತೇವಾಂಶ ಹೀರಿಕೊಂಡು ನೀರು ಉತ್ಪಾದಿಸುವ ಈ ಸಾಧನವು ಪ್ರತಿನಿತ್ಯ ೪೫-೫೦ ಲೀಟರ್ ನೀರು ಉತ್ಪಾದನೆ ಮಾಡಲಿದೆ.

ಏರೋ ವಾಟರ್ ಎಂಬ ಕಂಪನಿಯ  ತಂತ್ರಜ್ಞಾನ ಇದಾಗಿದ್ದು ವಾತಾವರಣದಲ್ಲಿರುವ ತೇವಾಂಶವನ್ನು ಸಂಗ್ರಹಿಸಿ ಅದನ್ನು ಸಾಂದ್ರೀಕರಿಸಿ ಹಾಗೂ ಶುದ್ದೀಕರಿಸುವ ಮೂಲಕ ಕುಡಿಯಲು ಯೋಗ್ಯವಾದ ನೀರನ್ನು ಉತ್ಪಾದಿಸಲಾಗುತ್ತಿದೆ.

**************************

ಅನಧಿಕೃತ ಕಟ್ಟಡಗಳಿಗೆ ತಕ್ಷಣವೇ ವಿದ್ಯುತ್ ಸಂಪರ್ಕ ಕಡಿತಗೊಳಿಸಿ, ನಿರ್ಮಾಣ ಕಾಮಗಾರಿಗಳನ್ನು ನಿಲ್ಲಿಸಲು ನೋಟಿಸ್ ಜಾರಿ ಮಾಡಬೇಕು. ನಕ್ಷೆ ಉಲ್ಲಂಘಿಸಿ ನಿರ್ಮಿಸಿರುವ ಭಾಗಗಳನ್ನು ತೆರವುಗೊಳಿಸದಿದ್ದರೆ ಕಟ್ಟಡ ಮಾಲೀಕರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಆದೇಶ ಮಾಡಿದರು

ಬೆಂಗಳೂರು ಕೇಂದ್ರ ನಗರ ಪಾಲಿಕೆ ಚಿಕ್ಕಪೇಟೆ ವ್ಯಾಪ್ತಿಯ ಕುಂಬಾರಪೇಟೆಯಲ್ಲಿ ಸಂಭವಿಸಿದ ಅಗ್ನಿ ಅವಘಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು.

ಚಿಕ್ಕಪೇಟೆ ವ್ಯಾಪ್ತಿಯ ವಾಣಿಜ್ಯ ಪ್ರದೇಶಗಳಲ್ಲಿ ಅವಘಡಗಳು ಸಂಭವಿಸದAತೆ ಹಾಗೂ ಅವುಗಳನ್ನು ನಿಯಂತ್ರಿಸುವ ಕುರಿತು ಸಮಗ್ರ ವರದಿ ಸಿದ್ಧಪಡಿಸಲು ಸಮಿತಿ ರಚಿಸಿ,ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಮುನ್ನೆಚ್ಚರಿಕಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

*************************

ಕರ್ನಾಟಕ ರಾಜ್ಯ ಕಾಂಗ್ರೆಸ್ ಸರ್ಕಾರದ ಆಡಳಿತ ಅವಧಿಯಲ್ಲಿ ನಿರುದ್ಯೋಗ ಸಮಸ್ಯೆ ಹಾಗೂ ಅಭಿವೃದ್ಧಿ ಕುಂಠಿತವಾಗಿದ್ದು ಕೇವಲ ಐದು ಗ್ಯಾರಂಟಿ ಯೋಜನೆಗಳನ್ನು ಗುರಿಯಾಗಿಟ್ಟುಕೊಂಡು ಆಡಳಿತ ನಡೆಸುತ್ತಿದೆ ಎಂದು ಕೇಂದ್ರದ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹಾಸನ ಜಿಲ್ಲೆಯ ಅರಕಲಗೂಡು ತಾಲೂಕಿನ ಕೋಡಕಹಳ್ಳಿ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ಯೋಗಕ್ಕಾಗಿ ಯುವಕರು ಧಾರವಾಡದಲ್ಲಿ ದೊಡ್ಡ ಮಟ್ಟದ ಪ್ರತಿಭಟನೆ ನಡೆಸಿದ್ದಾರೆ ಆದರೆ ಸರ್ಕಾರ ಇದನ್ನು ಎಷ್ಟರಮಟ್ಟಿಗೆ ಗಂಭೀರವಾಗಿ ತೆಗೆದುಕೊಂಡಿದೆ ಎಂಬುದನ್ನು ಜನರು ಯೋಚಿಸಬೇಕಿದೆ ಎಂದರು.

*************************

ಕೇಂದ್ರ ಸರ್ಕಾರದ ಹೊಸ ನೀತಿಯನುಸಾರ ಪಿಎಂ-ಕಿಸಾನ್ ಯೋಜನೆ ಸೇರಿದಂತೆ ಇತರೆ ಯೋಜನೆಗಳಾದ ಬರ ಪರಿಹಾರ, ಬೆಳೆ ವಿಮೆ ಮುಂತಾದ ಯೋಜನೆಗಳಿಗೆ ಕೇಂದ್ರ ನೊಂದಾಯಿತ ರೈತರ ಸಂಖ್ಯೆ ಕಡ್ಡಾಯಗೊಳಿಸಲಾಗಿದ್ದು, ರೈತರು ಫ್ರೂಟ್ಸ್ ತಂತ್ರಾAಶದಲ್ಲಿ ಇ-ಕೆವೈಸಿ ಮತ್ತು ಮೊಬೈಲ್ ನಂಬರ್‌ಗಳನ್ನು ಅಪ್ಡೇಟ್ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ.

ರೈತರ ಹೆಸರಿನಲ್ಲಿರುವ ಎಲ್ಲಾ ಭೂಹಿಡುವಳಿಗಳನ್ನು ಕಡ್ಡಾಯವಾಗಿ ತಮ್ಮ ಎಫ್.ಐ.ಡಿಯಲ್ಲಿ ಸೇರ್ಪಡಿಸಿಕೊಳ್ಳುವುದು ಮತ್ತು ರೈತರ ಸಹಮತಿ ಪತ್ರವನ್ನು ವಿದ್ಯುನ್ಮಾನ ರೀತಿಯಲ್ಲಿ ನೀಡುವುದು ಕಡ್ಡಾಯವಾಗಿದೆ. ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದಿಂದ ಕೇಂದ್ರ ನೊಂದಾಯಿತ ರೈತರ ಸಂಖ್ಯೆಯನ್ನು ಸೃಜಿಸಲಾಗುತ್ತದೆ. ಈ ಸಂಖ್ಯೆಯನ್ನು ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಳಿಸುವ ಪಿಎಂ-ಕಿಸಾನ್‌ಯೋಜನೆ ಸೇರಿದಂತೆ ಇತರೆ ಯೋಜನೆಗಳಾದ ಬರ ಪರಿಹಾರ, ಬೆಳೆ ವಿಮೆ, ಮುಂತಾದ ಯೋಜನೆಗಳಿಗೆ ಕೇಂದ್ರ ನೊಂದಾಯಿತ ರೈತರ ಸಂಖ್ಯೆಯನ್ನು ಕಡ್ಡಾಯವಾಗಿ ಉಪಯೋಗಿಸಲಾಗುತ್ತದೆ.

*************************

ವಿಜಯನಗರದ ಕಮಲಾಪುರದ ರೈತ ಸಮುದಾಯ ಭವನದಲ್ಲಿ ಜಿಲ್ಲಾಡಳಿತ ವತಿಯಿಂದ ಪ್ರವಾಸಿ ಮಾರ್ಗದರ್ಶಿಗಳು ಹಾಗೂ ಪ್ರವಾಸಿ ಮಿತ್ರರಿಗಾಗಿ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು. ಶಿಬಿರವನ್ನು ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ಉದ್ಘಾಟಿಸಿದರು.

ಬಳಿಕ ಮಾತನಾಡಿದ ಅವರು, ದೇಶ-ವಿದೇಶಗಳಿಂದ ಆಗಮಿಸುವ ಪ್ರವಾಸಿಗರಿಗೆ ನಾಡಿನ ಇತಿಹಾಸ, ಸಂಸ್ಕöÈತಿ ಹಾಗೂ ಪರಂಪರೆಯನ್ನು ಪರಿಚಯಿಸುವ ಮಹತ್ತರ ಜವಾಬ್ದಾರಿ ಪ್ರವಾಸಿ ಮಾರ್ಗದರ್ಶಿಗಳ ಮೇಲಿದೆ ಎಂದು ಹೇಳಿದರು.

*************************

ಬದಲಾದ ತಂತ್ರಜ್ಞಾನ ಯುಗದಲ್ಲಿ ಕೃತಕ ಬುದ್ಧಿಮತ್ತೆ ಕೃಷಿ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಯನ್ನು ತರುವ ತಾಂತ್ರಿಕತೆಯಾಗಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದ್ದಾರೆ.

ಹಾಸನ ಆಕಾಶವಾಣಿ ರೇಡಿಯೊ ಕಿಸಾನ್ ದಿವಸದ ಅಂಗವಾಗಿ ಏರ್ಪಡಿಸಿದ್ದ ಕೃತಕ ಬುದ್ಧಿಮತ್ತೆ ಹಾಗೂ ಕೃಷಿ ಅಭಿವೃದ್ಧಿ ಕುರಿತ ವಿಚಾರ ಸಂಕಿರಣವನ್ನು ಉದ್ಘಾಟಿಸಿ ಮಾತನಾಡಿದ ಅವರು, ಹವಾಮಾನ ಮುನ್ಸೂಚನೆ, ಮಣ್ಣು ಪರೀಕ್ಷೆ, ಬೆಳೆ ಸಂರಕ್ಷಣೆ ಹಾಗೂ ಮಾರುಕಟ್ಟೆ ದರಗಳ ವಿಶ್ಲೇಷಣೆಯಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ರೈತರ ಕೃಷಿ ಚಟುವಟಿಕೆಗಳು ಹಾಗೂ ರೈತರ ಆದಾಯದ ದ್ವಿಗುಣಕ್ಕೆ ಹೆಚ್ಚು ಸಹಾಯ ಮಾಡುತ್ತದೆ ಎಂದು ಹೇಳಿದರು.

ಹಾಸನ ಆಕಾಶವಾಣಿಯ ಕಾರ್ಯಕ್ರಮ ನಿರ್ವಹಣಾಧಿಕಾರಿ ಅರಕಲಗೂಡು ವಿ. ಮಧುಸೂದನ್ ಮಾತನಾಡಿ, ಆಕಾಶವಾಣಿ ಭಾರತೀಯ ಮಾಧ್ಯಮರಂಗದಲ್ಲಿ ಅತ್ಯಂತ ದೊಡ್ಡ ಜಾಲವನ್ನು ಹೊಂದಿರುವ ಮಾಧ್ಯಮ ವಾಗಿದ್ದು ದೇಶದಾದ್ಯಂತ ೫೯೧ ಕೇಂದ್ರಗಳನ್ನು ಹೊಂದಿದ್ದು ೧೮೮ ಆಕಾಶವಾಣಿ ಕೇಂದ್ರಗಳು ಕೃಷಿ ಕಾರ್ಯಕ್ರಮಗಳನ್ನು ನಿರ್ಮಿಸಿ ಪ್ರಸಾರ ಮಾಡುತ್ತಿವೆ ಎಂದರು.

ಈ ಪೈಕಿ ದೇಶದ ೯೭ ಆಕಾಶವಾಣಿ ಕೇಂದ್ರಗಳಲ್ಲಿ ಕಿಸಾನ್‌ವಾಣಿ ಕಾರ್ಯಕ್ರಮಗಳು ಪ್ರಸಾರವಾಗುತ್ತಿದ್ದು, ಕೇಂದ್ರ ಸರ್ಕಾರದ ಕೃಷಿ ಹಾಗೂ ಕೃಷಿಕರ ಕಲ್ಯಾಣ ಸಚಿವಾಲಯದ ಪ್ರಾಯೋಜಕತ್ವದಲ್ಲಿ ದೇಶದಲ್ಲಿಯೇ ಮೊಟ್ಟ ಮೊದಲ ಬಾರಿಗೆ ೨೦೦೪ರಲ್ಲಿ ಹಾಸನ ಅಕಾಶವಾಣಿ ಕೇಂದ್ರದಿAದ ಕಿಸಾನ್‌ವಾಣಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಯಿತು ಎಂದು ಅವರು ಹೇಳಿದರು.

*************************

ಬೆಂಗಳೂರಿನ ರಾಷ್ಟ್ರೀÃಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆಯು - ನಿಮ್ಹಾನ್ಸ್ ರಾಷ್ಟ್ರೀÃಯ ವಿಜ್ಞಾನ ದಿನಾಚರಣೆಯ ಅಂಗವಾಗಿ ೨೦೨೫ರ ಮಾರ್ಚ್ ೩ ಮತ್ತು ೪ರಂದು ಎರಡು ದಿನಗಳ ಬೃಹತ್ ವಿಜ್ಞಾನ ಪ್ರದರ್ಶನವನ್ನು ಹಮ್ಮಿಕೊಂಡಿದೆ.

ಈ ಬಾರಿಯ ಆಚರಣೆಯು "ವಿಜ್ಞಾನದಲ್ಲಿ ಮಹಿಳೆಯರು: ವಿಕಸಿತ ಭಾರತಕ್ಕೆ ಪ್ರೇರಕ ಶಕ್ತಿ" ಎಂಬ ಘೋಷವಾಕ್ಯದಡಿ ನಡೆಯಲಿದ್ದು, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಮಹಿಳೆಯರ ಸಬಲೀಕರಣ ಮತ್ತು 'ವಿಕಸಿತ ಭಾರತ @೨೦೪೭' ಗುರಿ ಸಾಧನೆಯಲ್ಲಿ ಅವರ ಕೊಡುಗೆಯನ್ನು ಇದು ಪ್ರತಿಬಿಂಬಿಸುತ್ತದೆ. ಭೌತಶಾಸ್ತçಜ್ಞ ಸರ್ ಸಿ.ವಿ. ರಾಮನ್ ಅವರು ಭಾರತಕ್ಕೆ ಮೊದಲ ನೊಬೆಲ್ ಪ್ರಶಸ್ತಿ ತಂದುಕೊಟ್ಟ 'ರಾಮನ್ ಎಫೆಕ್ಟ್' ಆವಿಷ್ಕಾರದ ಸ್ಮರಣಾರ್ಥವಾಗಿ ಪ್ರತಿ ವರ್ಷ ಈ ದಿನವನ್ನು ಆಚರಿಸಲಾಗುತ್ತದೆ.

*************************

ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆಯನ್ನು ಅವಲಂಬಿಸಿಕೊAಡು ಜೀವನ ನಡೆಸುತ್ತಿರುವ ಮೀನಗಾರರು ಕಡ್ಡಾಯವಾಗಿ ಮೀನುಗಾರಿಕೆ ಇಲಾಖೆಯಿಂದ ಪರವಾನಗಿ ಪಡೆದುಕೊಳ್ಳಬೇಕು ಎಂದು ಮೀನುಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಓ. ಗಿರೀಶ್ ಸಲಹೆ ನೀಡಿದರು.

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಅಂತರವಳ್ಳಿ ಗ್ರಾಮದ ಬಳಿ ಶಿಂಷಾ ನದಿಗೆ ೩ ಲಕ್ಷ ಮೀನಿನ ಮರಿಗಳನ್ನು ಬಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿ ಮೀನುಗಾರರು ೧ ಸಾವಿರ ಪಾವತಿಸಿ ಪರವಾನಗಿ ಪಡೆದರೆ, ಮೀನುಗಾರಿಕೆ ಸಂದರ್ಭದಲ್ಲಿ ಸಂಭವಿಸಬಹುದಾದ ಅವಘಡಗಳಿಗೆ ಇಲಾಖೆಯಿಂದ ೧೦ ಲಕ್ಷ ರೂಪಾಯಿವರೆಗೆ ಪರಿಹಾರ ಧನ ಲಭ್ಯವಾಗಲಿದೆ. ಅಂಗವಿಕಲತೆ ಉಂಟಾದರೆ ೩ ಲಕ್ಷದವರೆಗೆ ಪರಿಹಾರ ದೊರೆಯುತ್ತದೆ ಎಂದರು.

ಮೀನುಗಾರಿಕೆಗೆ ಅಗತ್ಯವಿರುವ ಬೋಟು, ಬಲೆಗಳು, ಮೀನು ಸಾಗಣೆಗಾಗಿ ಸ್ಕೂಟರ್ ಹಾಗೂ ಸರಕು ಸಾಗಣೆ ವಾಹನಗಳನ್ನು ಇಲಾಖಾ ಯೋಜನೆಗಳಡಿ ಪಡೆಯಲು ಅವಕಾಶವಿದ್ದು, ಎಲ್ಲಾ ಮೀನಗಾರರು ಪರವಾನಗಿ ಮಾಡಿಸಿಕೊಂಡು ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದರು.

*************************

೧೬ ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳನ್ನು ನಿಷೇಧಿಸುವ ಅಥವಾ ನಿಯಂತ್ರಿಸುವ ಕುರಿತು ಗಂಭೀರ ಚಿಂತನೆ ನಡೆಯುತ್ತಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ.

ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ನಡೆದ ರಾಷ್ಟ್ರೀAಯ ವಿಜ್ಞಾನ ದಿನದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಕ್ಕಳ ಯೋಗಕ್ಷೇಮ ಮತ್ತು ಸರ್ವತೋಮುಖ ಅಭಿವೃದ್ಧಿಯ ದೃಷ್ಟಿಯಿಂದ ಈ ಕ್ರಮವನ್ನು ಕೈಗೊಳ್ಳುವ ಬಗ್ಗೆ ವಿದ್ಯಾರ್ಥಿಗಳು, ಪೋಷಕರು ಹಾಗೂ ತಜ್ಞರಲ್ಲಿ ಚರ್ಚಿಸಿದ ಬಳಿಕ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ಮೊಬೈಲ್ ಬಿಡಿ - ಪುಸ್ತಕ ಹಿಡಿ ಎಂಬ ಅಭಿಯಾನವನ್ನು ಹಮ್ಮಿಕೊಳ್ಳಲು ಸರ್ಕಾರ ಯೋಜಿಸಿದೆ. ಮಕ್ಕಳ ಹಿತದೃಷ್ಟಿಯಿಂದ ಶೀಘ್ರವೇ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

*************************

ಗ್ಯಾರಂಟಿ ಯೋಜನೆಗಳು ಹೊರೆಯಾಗಿರದೆ ಅಭಿವೃದ್ಧಿಯ ಒಂದು ಭಾಗ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಸ್ಪಷ್ಟಪಡಿಸಿದ್ದಾರೆ.

ರಾಜ್ಯ ಸರ್ಕಾರಕ್ಕೆ ಗ್ಯಾರಂಟಿ ಯೋಜನೆಗಳು ಹೊರೆಯಾಗಿವೆ ಎಂಬ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆ ಕುರಿತು ಸುದ್ದಿಗಾರರಿಗೆ ಪ್ರತಿಕ್ರಿಯಿಸಿರುವ ಸಚಿವರು, ಸರ್ಕಾರ ಈ ಯೋಜನೆಗಳ ಮೇಲೆ ನೀಡಿದ ಭರವಸೆಯಂತೆ ೬೦ ಸಾವಿರ ಕೋಟಿ ರೂಪಾಯಿ ವ್ಯಯಿಸುತ್ತಿದೆ. ಈ ಯೋಜನೆಗಳು ಬಡವರ ಪರವಾಗಿದ್ದು, ಹಲವರಿಗೆ ಪ್ರಯೋಜನಕಾರಿಯಾಗಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ಯೋಜನೆಗಳ ಹಣಕಾಸು ವ್ಯವಹಾರವನ್ನು ನಿಭಾಯಿಸುವರು ಎಂದು ತಿಳಿಸಿದರು.

ಇದೇ ವಿಷಯದ ಕುರಿತು ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ. ಜಿ. ಪರಮೇಶ್ವರ್, ಉಪಮುಖ್ಯಮಂತ್ರಿಗಳು ಅವರಿಗೆ ದೊರೆತ ಅಂಕಿ-ಅAಶಗಳ ಆಧಾರದ ಮೇಲೆ ತಮ್ಮ ಅಭಿಪ್ರಾಯವನ್ನು ಹಂಚಿಕೊAಡಿದ್ದಾರೆ ಎಂದರು.

ಶ್ರೀಮಂತರು ಗ್ಯಾರಂಟಿ ಯೋಜನೆಗಳ ಪ್ರಯೋಜನ ಪಡೆಯಬಾರದು ಎಂಬ ಅಭಿಪ್ರಾಯದ ಕುರಿತು ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳ ಜಾರಿಯ ವೇಳೆ ಯಾವುದೇ ಆದಾಯ ಆಧಾರಿತ ವರ್ಗೀಕರಣ ಮಾಡಿರಲಿಲ್ಲ ಎಂದು ತಿಳಿಸಿದರು.

**************************

ವೈಜ್ಞಾನಿಕ ಮನೋಭಾವವನ್ನು ಉತ್ತೇಜಿಸುವ ನಿಟ್ಟಿನಲ್ಲಿ ೬೦ಕ್ಕೂ ಅಧಿಕ ವಸತಿ ಶಾಲೆಗಳಲ್ಲಿ ನಾವೀನ್ಯತಾ ಪ್ರಯೋಗಾಲಯಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ಘೋಷಿಸಿದ್ದಾರೆ.

ಬೆಂಗಳೂರಿನ ಜವಾಹರಲಾಲ್ ನೆಹರು ತಾರಾಲಯದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಆಯೋಜಿಸಿದ್ದ ರಾಷ್ಟ್ರೀÃಯ ವಿಜ್ಞಾನ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾವೀನ್ಯತಾ ಪ್ರಯೋಗಾಲಯಗಳ ಸ್ಥಾಪನೆಗೆ ಆರು ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದ್ದು, ಹಿಂದುಳಿದ ವರ್ಗಗಳ ವಸತಿ ಶಾಲೆಗಳಲ್ಲಿ ಈ ಪ್ರಯೋಗಾಲಯಗಳು ತಲೆ ಎತ್ತಲಿವೆ.

ವಿಜ್ಞಾನ ಎಲ್ಲರ ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಬೇಕು. ವಿದ್ಯಾರ್ಥಿಗಳನ್ನು ಸುಧಾರಿತ ತಂತ್ರಜ್ಞಾನದತ್ತ ಸೆಳೆಯುವ ನಿಟ್ಟಿನಲ್ಲಿ ರಾಜ್ಯಾದ್ಯಂತ ನೆಹರು ಸ್ಟೀÃಮ್ ಪ್ರಯೋಗಾಲಯಗಳು ಮತ್ತು ನಾವೀನ್ಯತಾ ಪ್ರಯೋಗಾಲಯಗಳನ್ನು ಹಂತ ಹಂತವಾಗಿ ಸ್ಥಾಪಿಸಲಾಗುವುದು. ಸರ್ವರಿಗೂ ವಿಜ್ಞಾನ

ಹಾಗೂ ಸರಳ ವಿಜ್ಞಾನ ಎಂಬ ಆಶಯದಂತೆ ಶಾಲಾ ಹಂತದಲ್ಲಿಯೇ ಮಕ್ಕಳಲ್ಲಿ ಸಂಶೋಧನಾ ಪ್ರವೃತ್ತಿ ಬೆಳೆಸುವುದು ತಮ್ಮ ಗುರಿಯಾಗಿದೆ ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ, ವಿಜ್ಞಾನ ತಂತ್ರಜ್ಞಾನ ಇಲಾಖೆಯ ಕಾರ್ಯದರ್ಶಿ ಎನ್. ಮಂಜುಳಾ, ತಾರಾಲಯದ ನಿರ್ದೇಶಕ ಗುರುಪ್ರಸಾದ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**************************

ಹುಬ್ಬಳ್ಳಿಯ ಕೆಎಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದಲ್ಲಿ ಮೂರನೇ ದಿನವಾಟದ ಅಂತ್ಯಕ್ಕೆ ಇಂದು ತನ್ನ ಮೊದಲನೇ ಇನ್ನಿಂಗ್ಸ್‌ನಲ್ಲಿ ಕರ್ನಾಟಕ ೫ ವಿಕೆಟ್ ನಷ್ಟಕ್ಕೆ ೨೨೦ರನ್ ಗಳಿಸಿದೆ.

ಪ್ರಸ್ತುತ ಕರ್ನಾಟಕ ಜಮ್ಮು ಕಾಶ್ಮೀರಕ್ಕಿಂತ ೩೮೪ ರನ್‌ಗಳ ಹಿನ್ನಡೆಯಲ್ಲಿದೆ. ಕರ್ನಾಟಕದ ಪರವಾಗಿ ಮಯಾಂಕ್ ಅಗರ್‌ವಾಲ್ ೧೩೦ ರನ್ ಹಾಗೂ ಕೃತಿಕ್ ಕೃಷ್ಣ ೨೭ ರನ್ ಗಳಿಸಿ, ಕಣದಲ್ಲಿದ್ದು, ನಾಳೆ ಆಟ ಮುಂದುವರಿಸಲಿದ್ದಾರೆ.

ನಾಲ್ಕನೇ ದಿನದಾಟ, ನಾಳೆ ಬೆಳಗ್ಗೆ ೯.೩೦ಕ್ಕೆ ಆರಂಭವಾಗಲಿದೆ.

**************************

ಶಿವಮೊಗ್ಗದ ಸಹ್ಯಾದ್ರಿ ಕಾಲೇಜಿನ ಎದುರಿನಲ್ಲಿರುವ ಟಿವಿ ಟವರ್‌ನಲ್ಲಿ ಶಿವಮೊಗ್ಗ ೧೦೧.೪ ಮೆಗಾಹರ್ಟ್ಸ್ ೧೦ ಕಿಲೋವ್ಯಾಟ್ ಸಾಮರ್ಥ್ಯದ ಎಫ್‌ಎಂ ರೇಡಿಯೋ ಕೇಂದ್ರವನ್ನು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್ ಮುರುಗನ್ ಲೋಕಾರ್ಪಣೆಗೊಳಿಸಿದರು.

ಇಂದಿನಿAದ ಶಿವಮೊಗ್ಗದಿಂದ ೧೫೦-೨೦೦ ಕಿಲೋ ಮಿಟರ್ ದೂರದ ವರೆಗೆ ಈ ಎಫ್‌ಎಂ ರೇಡಿಯೋ ವ್ಯಾಪಿಸಲಿದೆ.

ಟ್ರಾನ್ಸ್ಮಿಟರ್ ಉದ್ಘಾಟಿಸಿ, ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು, ಎಫ್‌ಎಂ ಅನ್ನು ಪ್ರಬಲ ಮಾಧ್ಯಮವಾಗಿ ಬಳಸಿಕೊಳ್ಳಬಹುದಾಗಿದೆ. ಮಾಧ್ಯಮಗಳೇ ಇಲ್ಲದ ಸಮಯದಲ್ಲಿ ಆಕಾಶವಾಣಿ ಸ್ಥಳೀಯರನ್ನು ಉತ್ತೇಜಿಸುತ್ತಿತ್ತು, ಈ ಮಾಧ್ಯಮ ಸ್ಥಳೀಯ ಕಲಾವಿರದನ್ನು ವಿಶ್ವ ಮಟ್ಟಕ್ಕೆ ಕರೆದೊಯ್ದಿದೆ ಎಂದರು.

ಧ್ವನಿ ಎಲ್. ಮುರುಗನ್

********ಮುಕ್ತಾಯ********